**ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ**

**ಸಿ ಸಿ ನಂ. 832/2020**

**ಚಾ.ಸಾ.** 8

**ಪ್ರಾ.ಸಾ.** 4

**ದಿನಾಂಕಃ 13.03.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೊಧಿಸಲಾಯಿತು.**

| | |
|---|---|
| ಸಾಕ್ಷಿಯ ಹೆಸರು | ಶಂಕರ ಲಮಾಣಿ |
| ತಂದೆಃ ಗಂಡನ ಹೆಸರು | ರೂಪಪ್ಪ |
| ಉದ್ಯೋಗ | ಎ ಎಸ್ ಐ ನವಲಗುಂದ |
| ವಯಸ್ಸು | 48 ವರ್ಷ |
| ವಾಸಸ್ಥಳ | ನವಲಗುಂದ |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದ**

ದಿಃ 19.07.2021 ರಂದು ಕಲಘಟಗಿ ಠಾಣೆಯಲ್ಲಿ ಎಸ್ ಹೆಚ್ ಓ ಕರ್ತವ್ಯದಲ್ಲಿದ್ದಾಗ ಚಾಸಾ-1 ರವರು ಬಂದು ದೂರು ನೀಡಿದ ಮೇರೆಗೆ ಠಾಣಾ ಗುನ್ನಾ 172/2021 ನೇದ್ದರಲ್ಲಿ ಪ್ರಕರಣ ದಾಖಲು ಮಾಡಿಕೊಂಡು ಮೂಲ ಪ್ರತಿಯನ್ನು ಮಾನ್ಯ ನ್ಯಾಯಾಲಯಕ್ಕೆ ಪಿ ಸಿ 490 ರವರ ಮುಖಾಂತರ ಕಳುಹಿಸಿರುತ್ತೇನೆ. ಅದೇ ದಿನ ದೊರೆತ ಮುದ್ದೆಮಾಲನ್ನು ಮಾಲುಪಟ್ಟಿಯಲ್ಲಿ ನಮೂದಿಸಿ ಮಾನ್ಯ ನ್ಯಾಯಾಲಯಕ್ಕೆ ಕಳುಹಿಸಿರುತ್ತೇನೆ. ಅದೇ ದಿನ ಚಾಸಾ-4 ಮತ್ತು 5 ರವರ ಹೇಳಿಕೆಗಳನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡೆನು. ನಂತರ ಮುಂದಿನ ತನಿಖೆಯನ್ನು ಚಾಸಾ-1 ರವರಿಗೆ ಹಸ್ತಾಂತರಿಸಿದೆ.

ಈ ಪ್ರಕರಣದಲ್ಲಿ ಆರೋಪಿಯು ತಲೆಮರೆಸಿಕೊಂಡ ಕಾರಣ ನಾನು ಆರೋಪಿಯನ್ನು ತನಿಖಾ ಕಾಲದಲ್ಲಿ ನೋಡಿರುವುದಿಲ್ಲ. ಆದ್ದರಿಂದ ಈ ಪ್ರಕರಣದ ಆರೋಪಿಯನ್ನು ಗುರುತಿಸಲು ಸಾಧ್ಯವಿಲ್ಲ.

ಸಾಕ್ಷಿಯು ಮಾಲುಪಟ್ಟಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ10 ಎಂದು, ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ10(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ2 ಎಂದು, ಅದರ ಮೇಲೆ ಇರುವ ಹಿಂಬರಹ ಮತ್ತು ಸಾಕ್ಷಿಯ ಸಹಿಯನ್ನು ನಿಪಿ2(ಬಿ) ಮತ್ತು (ಸಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ11 ಎಂದು, ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ11(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ 45 ಟೆಟ್ರಾ ಪಾಕೇಟಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ಒಟ್ಟು ಮು.ಮಾ.1 ಎಂದು ಗುರುತಿಸಲಾಗಿದೆ.

**ಪಾಟೀ ಸವಾಲುಃ ಅಪಾದಿತನ ಪರ ಶ್ರೀ ಎಮ್ ಜಿ ಸಿ ವಕೀಲರಿಂದ**

ಈ ಪ್ರಕರಣದಲ್ಲಿ ದೂರು ನೀಡಿದ ಚಾಸಾ-1 ರವರು ನನ್ನ ಮೇಲಾಧಿಕಾರಿಗಳು ಎಂದರೆ ಸರಿ. ಠಾಣೆಯ ಅಂಕೆ ಸಂಖ್ಯೆಯ ಸಲುವಾಗಿ ಈ ಪ್ರಕರಣವನ್ನು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಯಾವುದೇ ಹೇಳಿಕೆಯನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ಈ ಪ್ರಕರಣಕ್ಕೆ ಅನುಕೂಲವಾಗುವ ರೀತಿಯಲ್ಲಿ ಕಾಗದ ಪತ್ರಗಳನ್ನು ಸೃಷ್ಟಿಸಿ ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಈ ಪ್ರಕರಣದ ಆರೋಪಿಗೂ ಮತ್ತು ಮು. ಮಾ1 ರಲ್ಲಿರುವ ಮುದ್ದೆಮಾಲಿಗೂ ಯಾವುದೇ ರೀತಿಯ ಸಂಬಂಧವಿಲ್ಲ ಎಂದರೆ ಸರಿಯಲ್ಲ. ತನಿಖೆ ಮಾಡಲು ಗುನ್ನಾ ಸ್ಥಳಕ್ಕೆ ಹೋಗಿದ್ದಿರಾ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಕಲಂ 54 ಕೆ ಇ ಆಕ್ಟ್ ನ್ನು ಓದಿ ತಿಳಿಸಿದುಕೊಂಡಿದ್ದಿರಾ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಕಲಂ 54 ಕೆ ಇ ಆಕ್ಟ್ ರಡಿಯಲ್ಲಿ ಇರುವ ಪ್ರಕ್ರಿಯೇಗಳನ್ನು ಅನುಸರಿಸಿಲ್ಲ ಎಂದರೆ ಸರಿಯಲ್ಲ. ಆರೋಪಿಯ ವಿರುದ್ಧ ಯಾವುದೇ ಅಪರಾಧವು ಸಾಬೀತುವಾಗದೇ ಇದ್ದರು ಸಹ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು-ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

**ಓ ಹೇ ಕೆ ಸರಿ ಇದೆ,**

**ದಿವಾಣಿ ನ್ಯಾಯಾಧೀಶರು ಹಾಗೂ**

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ.**